# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | ~~58~~ 87 |
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು |
| ಉತ್ತರಿಸಬೇಕಾದ ದಿನಾಂಕ | : | 09.12.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಹಾರಾಷ್ಟ್ರ ಸರ್ಕಾರವು ಕರ್ನಾಟಕ ಗಡಿ ಭಾಗದ ಸುಮಾರು 865 ಕರ್ನಾಟಕದ ಹಳ್ಳಿಗಳನ್ನು ಮರಾಠ ಭಾಷಿಕರ ಗ್ರಾಮಗಳೆಂದು ಘೋಷಿಸಿ, ಶೈಕ್ಷಣಿಕ ಮತ್ತು ಉದ್ಯೋಗದಲ್ಲಿ ಶೇ.3 ರಷ್ಟು ಮೀಸಲಾತಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ |
| ಆ) | ಸರ್ಕಾರವು ಕರ್ನಾಟಕ-ಮಹಾರಾಷ್ಟ್ರ ಗಡಿ ಭಾಗದಲ್ಲಿ ಕನ್ನಡಿಗರು ವಾಸಿಸುತ್ತಿರುವ ಹಳ್ಳಿಗಳನ್ನು ಕನ್ನಡ ಭಾಷಿಕರ ಗ್ರಾಮಗಳೆಂದು ಘೋಷಿಸಿ, ಶೈಕ್ಷಣಿಕ ಮತ್ತು ಉದ್ಯೋಗಗಳಲ್ಲಿ ಮೀಸಲಾತಿ ನೀಡುವ ಕುರಿತು ಗಮನ ಹರಿಸಿದೆಯೇ; | ಇಲ್ಲ |
| ಇ) | ಈ ಪ್ರದೇಶಗಳಲ್ಲಿನ ಕನ್ನಡಿಗರು ಅನಿವಾರ್ಯವಾಗಿ ಮರಾಠಿ ಶಾಲೆಗಳಿಗೆ ಸೇರಬೇಕಾದ ಪರಿಸ್ಥಿತಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಜಾಗೃತ ಕ್ರಮಗಳೇನು? | ಬೆಳಗಾವಿ ಶೈಕ್ಷಣಿಕ ಜಿಲ್ಲೆಯ ಗಡಿಭಾಗದ ಶೈಕ್ಷಣಿಕ ವಲಯಗಳಾದ ಖಾನಾಪೂರ ವಲಯದಲ್ಲಿ ಗಡಿ ಪ್ರದೇಶಕ್ಕೆ ಹೊಂದಿಕೊಂಡಂತೆ 07 ಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆಗಳಿರುತ್ತವೆ ಮತ್ತು ಬೆಳಗಾವಿ ಗ್ರಾಮೀಣ ವಲಯದ ಗಡಿ ಪ್ರದೇಶಕ್ಕೆ ಹೊಂದಿಕೊಂಡಂತೆ 14 ಕನ್ನಡ ಮಾಧ್ಯಮ ಪ್ರಾಥಮಿಕ ಹಾಗೂ 02 ಕನ್ನಡ ಮಾಧ್ಯಮ ಪ್ರೌಢಶಾಲೆಗಳಿರುತ್ತವೆ. ಬೆಳಗಾವಿ ಜಿಲ್ಲೆ ಖಾನಾಪೂರ ತಾಲೂಕಿನ ಸರ್ಕಾರಿ ಮರಾಠಿ ಕಿರಿಯ ಪ್ರಾಥಮಿಕ ಶಾಲೆ ಉಮ್ರಾಪಾಣಿ ಈ ಶಾಲೆಯು ಪ್ರಾರಂಭವಾದಾಗಿನಿಂದ ಮರಾಠಿ ಮಾಧ್ಯಮದಲ್ಲಿ ನಡೆಸಲಾಗುತ್ತಿತ್ತು. ಸದರಿ ಶಾಲೆಯು ಜೂನ್ 2017 ನೇ ಸಾಲಿನಲ್ಲಿ ಮರಾಠಿ ಮಕ್ಕಳ ದಾಖಲಾತಿ ಕಡಿಮೆ ಇರುವುದರಿಂದ ಮುಚ್ಚಲ್ಪಟ್ಟಿರುತ್ತದೆ. ಪ್ರಸ್ತುತ 2024-25ನೇ ಸಾಲಿನಲ್ಲಿ ಸಾರ್ವಜನಿಕರ ಮನವಿ ಮೇರೆಗೆ ಪುನಃ ಕನ್ನಡ ಮಾಧ್ಯಮದಲ್ಲಿ ಶಾಲೆ ಪ್ರಾರಂಭವಾಗಿರುತ್ತದೆ ಮತ್ತು ಸರ್ಕಾರದ ಆದೇಶ |

| | | |
|---|---|---|
| | | ಸಂಖ್ಯೆ:ಇಪಿ 225 ಪಿಬಿಎಸ್ 2022, ದಿನಾಂಕ:26.06.2024 ರನ್ವಯ ಮುಚ್ಚಲ್ಪಟ್ಟಿರುವ ಮರಾಠಿ ಮಾಧ್ಯಮದ ಶಾಲೆಯ ಕಟ್ಟಡ (03 ಕೊಠಡಿ) ಮತ್ತು ಲಭ್ಯವಿದ್ದ ಸಂಪನ್ಮೂಲಗಳನ್ನು ಬಳಸಿಕೊಂಡು ಮಂಜೂರಾಗಿರುವ 03 ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ನಿಯೋಜನೆ ಹಾಗೂ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು 2024-25ನೇ ಶೈಕ್ಷಣಿಕ ಸಾಲಿನಿಂದ ಕನ್ನಡ ಮಾಧ್ಯಮದ ತರಗತಿಯನ್ನು ಪ್ರಾರಂಭಿಸಲು ಅನುಮತಿ ನೀಡಿ ಆದೇಶಿಸಲಾಗಿದೆ. ಅದರಂತೆ ಪ್ರಸ್ತುತ ಸದರಿ ಶಾಲೆಯಲ್ಲಿ 1 ರಿಂದ 5ನೇ ತರಗತಿಯವರೆಗೆ ಒಟ್ಟು 25 ಮಕ್ಕಳಿದ್ದು ಒಬ್ಬ ಶಿಕ್ಷಕರನ್ನು ನಿಯೋಜನೆ ಮೇಲೆ ಮತ್ತು ಒಬ್ಬ ಅತಿಥಿ ಶಿಕ್ಷಕರನ್ನು ನೇಮಿಸಿ ವರ್ಗಗಳನ್ನು ನಡೆಸಲಾಗುತ್ತಿದೆ. |

ಸಂಖ್ಯೆ: ಇಪಿ 489 ಎಸ್‌ಟಿಬಿ 2024

( ಎಸ್. ಮಧು ಬಂಗಾರಪ್ಪ )
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.